# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 797 |
| ಸದಸ್ಯರ ಹೆಸರು | : | ಶ್ರೀ.ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25.09.2020 |
| ಉತ್ತರಿಸುವ ಸಚಿವರು | : | ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ಪಶುಚಿಕಿತ್ಸಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ತಜ್ಞ ವೈದ್ಯರ/ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು; | ರಾಜ್ಯದ ಪಶುಚಿಕಿತ್ಸಾಲಯಗಳಲ್ಲಿ 2366 ಪಶು ತಜ್ಞವೈದ್ಯರು/ವೈದ್ಯಾಧಿಕಾರಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ. |
| ಆ) | ಸದರಿ ಪಶುಚಿಕಿತ್ಸಾಲಯಗಳಲ್ಲಿರುವ ಪಶುತಜ್ಞ ವೈದ್ಯರ/ವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; | ಸದರಿ ಪಶು ಚಿಕಿತ್ಸಾಲಯಗಳಲ್ಲಿ ಪಶು ತಜ್ಞ ವೈದ್ಯರ/ವೈದ್ಯಾಧಿಕಾರಿಗಳ 1064 ಖಾಲಿ ಹುದ್ದೆಗಳಿವೆ. |
| ಇ) | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಹಾಲಿ 1064 ಪಶುವೈದ್ಯರ ಹುದ್ದೆಗಳು ಖಾಲಿ ಇರುತ್ತದೆ.<br>ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಹಾಗೂ ಮುಖ್ಯ ಪಶುವೈದ್ಯಾಧಿಕಾರಿ ಮತ್ತು ಹಿರಿಯ ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಪಶುವೈದ್ಯಾಧಿಕಾರಿ ಹುದ್ದೆಯಿಂದ ಕಾಲಮಿತಿ ಪದೋನ್ನತಿ/ ಮುಂಬಡ್ತಿ ಮುಖಾಂತರ ತುಂಬಲು ಕ್ರಮವಹಿಸಲಾಗಿದೆ ಹಾಗೂ ಇಲಾಖೆಯಲ್ಲಿ ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ. ಆದರೆ, ಹೊರಗುತ್ತಿಗೆ ಆಧಾರದ ಮೇಲೆ ಪಶುವೈದ್ಯರ ನೇಮಕ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

<table>
<tr><td></td><td></td><td>ಮುಂದುವರೆದು, 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ.</td></tr>
<tr><td>ಈ)</td><td>ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯರ/ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)</td><td>ಗುತ್ತಿಗೆ ಆಧಾರದ ಮೇಲೆ ಯಾವುದೇ ಪಶುವೈದ್ಯಾಧಿಕಾರಿಗಳು ಕಾರ್ಯನಿರ್ವಹಿಸುತ್ತಿಲ್ಲ. ಹೊರಗುತ್ತಿಗೆ ಆಧಾರದ ಮೇಲೆ 2256 ಡಿ ದರ್ಜೆ ನೌಕರರು, 115 ವಾಹನ ಚಾಲಕರು ಮತ್ತು 10 ಡಾಟಾ ಎಂಟ್ರಿ ಆಪರೇಟರ್‌ಗಳ ಸೇವೆ ಪಡೆದುಕೊಳ್ಳಲಾಗಿದೆ.</td></tr>
<tr><td>ಉ)</td><td>ಇವರುಗಳಿಗೆ ನೀಡಲಾಗುತ್ತಿರುವ ಮಾಸಿಕ ವೇತನ ವೆಷ್ಟು;</td><td>ಹೊರಗುತ್ತಿಗೆ 'ಡಿ' ದರ್ಜೆ ನೌಕರರಿಗೆ ಈ ಕೆಳಕಂಡಂತೆ ವೇತನ ನಿಗದಿಪಡಿಸಲಾಗಿದೆ.
<table>
<tr><th colspan="5">SALARY STRUCTURE EFFECT FROM 01-04-2020</th></tr>
<tr><th colspan="5">URBAN LOCAL BODIES AND TOWN AND VILLAGE PACHAYATHS</th></tr>
<tr><th>Description</th><th>Zone- IV</th><th>Zone- III</th><th>Zone- II</th><th>Zone- I</th></tr>
<tr><td>Grand Total</td><td>17,900.06</td><td>18,556.22</td><td>18,993.65</td><td>19,431.09</td></tr>
</table>
ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಈ ಕೆಳಕಂಡಂತೆ ವೇತನ ನಿಗದಿಪಡಿಸಲಾಗಿದೆ.
<table>
<tr><th colspan="2">SALARY STRUCTURE<br>URBAN LOCAL BODIES</th></tr>
<tr><th>Description</th><th>Zone- I</th></tr>
<tr><td>Grand Total</td><td>17803.33</td></tr>
</table></td></tr>
</table>

<table>
<tr><td></td><td></td><td>ವಾಹನ ಚಾಲಕರಿಗೆ ಈ ಕೆಳಕಂಡಂತೆ ವೇತನ ನಿಗದಿಪಡಿಸಲಾಗಿದೆ.<br><table><tr><th colspan="3">SALARY STRUCTURE</th></tr><tr><th colspan="3">URBAN LOCAL BODIES AND TOWN</th></tr><tr><td>Description</td><td>Zone-II</td><td>Zone-I</td></tr><tr><td>Grand Total</td><td>16893.60</td><td>17364.89</td></tr></table></td></tr>
<tr><td>ಊ)</td><td>ಇವರನ್ನು ಖಾಯಂಗೊಳಿಸಲು ಸರ್ಕಾರ ಯೋಜನೆ ರೂಪಿಸಿದೆಯೇ?</td><td>ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ.</td></tr>
</table>

ಸಂ: ಪಸಂಮೀ ಇ-155 ಪಸಸೇ 2020

(ಪ್ರಭು. ಬಿ. ಚವ್ಹಾಣ್)
ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು